## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿನ ಕುಡಿಯುವ ನೀರಿನ ಗುಣಮಟ್ಟ ಬಾಧಿತ ಜನವಸತಿಗಳಲ್ಲಿ ನೀರು ಶುದ್ಧೀಕರಣ ಘಟಕಗಳನ್ನು **ಕೆ.ಆರ್.ಐ.ಡಿ.ಎಲ್. ಸಂಸ್ಥೆ ಮುಖೇನ** ಅನುಷ್ಠಾನಗೊಳಿಸಲಾಗಿರುವ **ಘಟಕಗಳನ್ನು ಹಸ್ತಾಂತರ ಹಾಗೂ ವಾರ್ಷಿಕ ನಿರ್ವಹಣೆಯ ಕರಾರು ಮಾಡಿಕೊಳ್ಳುವ** ಕುರಿತು.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 21 ಗ್ರಾನೀಸ(8)2015, ದಿನಾಂಕ:01.01.2016
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 06 ಗ್ರಾನೀಸ(8)2016, ದಿನಾಂಕ:01.04.2016
3. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 31 ಗ್ರಾನೀಸ(8)2016, ದಿನಾಂಕ:30.07.2016
4. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 50 ಗ್ರಾನೀಸ(8)2015(P2), ದಿನಾಂಕ:29.07.2016
5. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 17 ಗ್ರಾನೀಸ(8)2016, ದಿನಾಂಕ:04.06.2016
6. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 17 ಗ್ರಾನೀಸ(8)2016, ದಿನಾಂಕ:27.06.2016
7. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 17 ಗ್ರಾನೀಸ(8)2016, ದಿನಾಂಕ:23.09.2016
8. ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಐ.ಡಿ.ಎಲ್.ಸಂಸ್ಥೆರವರ ಪತ್ರದ ಸಂಖ್ಯೆ: ಕೆಆರ್ಐಡಿಎಲ್/ ಕು.ನೀ.ಶು.ಘ./2016-17, ದಿನಾಂಕ:15.11.2016
9. ದಿನಾಂಕ:09.11.2016ರಂದು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ಕೆ.ಆರ್.ಐ.ಡಿಎಲ್. ಸಂಸ್ಥೆಗೆ ವಹಿಸಿದ ನೀರು ಶುದ್ಧೀಕರಣ ಘಟಕಗಳ ಅನುಷ್ಠಾನ ಕುರಿತ ಪ್ರಗತಿ ಪರಿಶೀಲನಾ ಸಭೆಯ ನಡವಳಿ

*****

**ಪೀಠಿಕೆ:**

ರಾಜ್ಯದ ಗ್ರಾಮೀಣ ಜನವಸತಿಗಳಲ್ಲಿನ ಕುಡಿಯುವ ನೀರಿನ ಜಲಮೂಲಗಳಲ್ಲಿ ರಾಸಾಯನಿಕ ಹಾಗೂ ಇತರೆ ಕಲುಷಿತೆಗಳನ್ನು ಹೊಂದಿರುವ ಮತ್ತು ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಹಾನಿಕಾರಕ ಸೂಕ್ಷ್ಮಾಣು ಜೀವಿಗಳು ಕಂಡು ಬಂದಿದ್ದು, ಇದರಿಂದಾಗಿ ಕುಡಿಯುವ ನೀರು ಗುಣಮಟ್ಟದ ಭಾದೆಗೊಳಗಾಗಿರುವುದು ಕಂಡು ಬಂದಿದೆ. ಈ ಅಂಶವನ್ನು ಸರ್ಕಾರವು ಅತ್ಯಂತ ಗಂಭೀರವಾಗಿ ಪರಿಗಣಿಸಿದ್ದು, ಅಂತಹ ಗುಣಮಟ್ಟದ ಭಾದೆಗೊಳಗಾಗಿರುವ ಜಲಮೂಲಗಳಿರುವ ಜನವಸತಿಗಳಲ್ಲಿ ಈಗಾಗಲೇ ಸರ್ಕಾರದಿಂದ ಮೇಲೆ (1) & (4)ರಲ್ಲಿ ಓದಲಾದ ಆದೇಶದಲ್ಲಿ **ಮೊದಲ ಹಂತದಲ್ಲಿ ಸಾಮಾನ್ಯ ಮಾದರಿಯ 1073** ನೀರು ಶುದ್ಧೀಕರಣ ಘಟಕಗಳನ್ನು, ಮೇಲೆ (2) & (4)ರಲ್ಲಿ ಓದಲಾದ ಆದೇಶದಲ್ಲಿ ಎರಡನೇ **ಹಂತದಲ್ಲಿ ಕಿಯೋಸ್ಕ್ ಮಾದರಿಯ 1454** ನೀರು ಶುದ್ಧೀಕರಣ ಘಟಕಗಳನ್ನು ಮತ್ತು ಮೇಲೆ (3)ರಲ್ಲಿ ಓದಲಾದ ಆದೇಶದಲ್ಲಿ **ಮೂರನೇ ಹಂತದಲ್ಲಿ ಸಾಮಾನ್ಯ & ಕಿಯೋಸ್ಕ್ ಮಾದರಿಯ 1680** ನೀರು ಶುದ್ಧೀಕರಣ ಘಟಕಗಳನ್ನು ಕೆ.ಆರ್.ಐ.ಡಿ.ಎಲ್. ಸಂಸ್ಥೆ ಮುಖೇನ ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿರುತ್ತದೆ.

ಮೇಲೆ(8)ರಲ್ಲಿ ಓದಲಾದ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಐ.ಡಿ.ಎಲ್.ಸಂಸ್ಥೆರವರ ಪ್ರಸ್ತಾವನೆಯಲ್ಲಿ ಕೆಲವು ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಿರುವ ನೀರು ಶುದ್ಧೀಕರಣ ಘಟಕಗಳ ನಿರ್ವಹಣಾ ವೆಚ್ಚವನ್ನು ಯಾರು ಭರಿಸಬೇಕೆಂಬ ಬಗ್ಗೆ ಗೊಂದಲ ಹಾಗೂ ಆಕ್ಷೇಪಣೆಗಳು ಇದ್ದು, ಈಗಾಗಲೇ ಕೆ.ಆರ್.ಐ.ಡಿ.ಎಲ್.ಸಂಸ್ಥೆ ಮುಖೇನ ಅನುಷ್ಠಾನಗೊಳಿಸಿ ಕಾರ್ಯಚರಣೆಯಲ್ಲಿರುವ ಘಟಕಗಳ ಕಾರ್ಯನಿರ್ವಹಣೆಯಲ್ಲಿ ತೊಂದರೆ ಆಗುತ್ತಿದೆ ಅಲ್ಲದೇ, ಹಲವು ಘಟಕಗಳು ದುರಸ್ಥಿಗೆ ಒಳಪಟ್ಟಿರುತ್ತವೆ ಹೀಗಾಗಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ ಎಂದು ತಿಳಿಸಿರುತ್ತಾರೆ. ಆದುದರಿಂದ, ಮೇಲೆ(9)ರಲ್ಲಿ ಓದಲಾದ **ದಿನಾಂಕ:09.11.2016ರಂದು** ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭಾ ನಡವಳಿಯಲ್ಲಿ ಮಾನ್ಯ ಇಲಾಖಾ ಸಚಿವರ ಸೂಚನೆಯಂತೆ **30.06.2017ರವರೆಗಿನ ವಾರ್ಷಿಕ ನಿರ್ವಹಣೆ ಗುತ್ತಿಗೆ (AMC)**ಗೆ ಸಂಬಂಧಿಸಿದಂತೆ ಕೆ.ಆರ್.ಐ.ಡಿ.ಎಲ್.ಸಂಸ್ಥೆಯವರೇ ನಿರ್ವಹಿಸಿ, ಶುದ್ಧ ಕುಡಿಯುವ ನೀರನ್ನು ಪೂರೈಸಿ ಜನರ ಆರೋಗ್ಯದ ಹಿತರಕ್ಷಣೆ ಕಾಪಾಡುವ ಉದ್ದೇಶದಿಂದ ಆದೇಶ ಹೊರಡಿಸಲು ಸರ್ಕಾರ ನಿರ್ಧರಿಸಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/17/ಗ್ರಾನೀಸ(8)2016, ಬೆಂಗಳೂರು, ದಿನಾಂಕ:09.01.2017**

ಪೀಠಿಕೆಯಲ್ಲಿನ ಪ್ರಸ್ತಾವನೆಯನ್ನು ಪರಿಶೀಲಿಸಿ, ಮೇಲೆ (5), (6) ಮತ್ತು (7)ರಲ್ಲಿ ಓದಲಾದ ಸರ್ಕಾರದ ಪತ್ರಗಳಲ್ಲಿ ಈಗಾಗಲೇ ಸೂಚಿಸಿದಂತೆ, ರಾಜ್ಯದ ಗ್ರಾಮೀಣ ಜನವಸತಿಗಳಲ್ಲಿ **ಮೊದಲನೇ ಹಂತದಲ್ಲಿ ಸಾಮಾನ್ಯ ಮಾದರಿಯ 1073** ನೀರು ಶುದ್ಧೀಕರಣ ಘಟಕಗಳು, **ಎರಡನೇ ಹಂತದಲ್ಲಿ ಕಿಯೋಸ್ಕ್ ಮಾದರಿಯ 1454** ನೀರು ಶುದ್ಧೀಕರಣ ಘಟಕಗಳು ಹಾಗೂ **ಮೂರನೇ ಹಂತದಲ್ಲಿ ಸಾಮಾನ್ಯ & ಕಿಯೋಸ್ಕ್ ಮಾದರಿಯ 1680** ನೀರು ಶುದ್ಧೀಕರಣ ಘಟಕಗಳನ್ನು

ಕೆ.ಆರ್.ಐ.ಡಿ.ಎಲ್.ಸಂಸ್ಥೆ ಮುಖೇನ ಈಗಾಗಲೇ ಅನುಷ್ಠಾನಗೊಳಿಸಿ, ಕಾರ್ಯಾಚರಣೆಯಲ್ಲಿರುವ ನೀರು ಶುದ್ಧೀಕರಣ ಘಟಕಗಳ **ವಾರ್ಷಿಕ ನಿರ್ವಹಣೆ ಗುತ್ತಿಗೆ (AMC)**ಯನ್ನು **30.06.2017ರವರೆಗೆ** ಕೆ.ಆರ್.ಐ.ಡಿ.ಎಲ್.ಸಂಸ್ಥೆಯವರು ನಿರ್ವಹಿಸಲು ಈ ಕೆಳಕಂಡ ಮಾನದಂಡಗಳನ್ವಯ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

1. **ಕೆ.ಆರ್.ಐ.ಡಿ.ಎಲ್. ಸಂಸ್ಥೆ ಮುಖೇನ** ಈಗಾಗಲೇ ಅನುಷ್ಠಾನಗೊಳಿಸಿರುವ ನೀರು ಶುದ್ಧೀಕರಣ ಘಟಕಗಳನ್ನು, ಸಂಬಂಧಪಟ್ಟ ಗ್ರಾಮ ಪಂಚಾಯತಿಗಳಿಗೆ ನೀರಿನ ಗುಣಮಟ್ಟದ ಪರೀಕ್ಷೆಯನ್ನು ಭಾರತೀಯ ಮಾನಕ *ISO 10500/2012* ಪ್ರಕಾರ ಕೈಗೊಂಡು ನಂತರ **ಕಾರ್ಯಾಚರಣೆ ಮತ್ತು ನಿರ್ವಹಣೆಗಾಗಿ (O&M),** ಸಂಬಂಧಪಟ್ಟ ಗ್ರಾಮ ಪಂಚಾಯತಿಗೆ ಹಸ್ತಾಂತರಿಸುವುದು ಹಾಗೂ ಸಂಬಂಧಪಟ್ಟ ಗ್ರಾಮ ಪಂಚಾಯತ್‌ನ ಪಂಚಾಯತ್ ಅಭಿವೃದ್ಧಿ ಅಧಿಕಾರಿ (PDO) ಅಥವಾ ಗ್ರಾಮ ಪಂಚಾಯತಿ ನಿಗದಿಪಡಿಸುವ ಸೂಕ್ತವಾದ ವ್ಯಕ್ತಿಯನ್ನು ಕಡ್ಡಾಯವಾಗಿ ನೀರು ಶುದ್ಧೀಕರಣ ಘಟಕಗಳ **ಉಸ್ತುವಾರಿಗಾಗಿ ನಿಯೋಜನೆ** ಮಾಡುವುದು.

2. ಕೆ.ಆರ್.ಐ.ಡಿ.ಎಲ್. ಸಂಸ್ಥೆ ಮುಖೇನ ಅನುಷ್ಠಾನಗೊಳಿಸಿರುವ ಎಲ್ಲಾ ಮಾದರಿಯ **4207 ನೀರು ಶುದ್ಧಿಕರಣ ಘಟಕಗಳ ವಾರ್ಷಿಕ ನಿರ್ವಹಣೆ ಗುತ್ತಿಗೆ (AMC) ಯನ್ನು 30.06.2017ರವರೆಗೆ** ಕೆ.ಆರ್.ಐ.ಡಿ.ಎಲ್. ಸಂಸ್ಥೆಯವರು ನಿರ್ವಹಿಸುವುದು. ಸದರಿ ನಿರ್ವಹಣೆಯ ವೆಚ್ಚಕ್ಕೆ ಸಂಬಂಧಿಸಿದಂತೆ, ನೀರು ಶುದ್ಧೀಕರಣ ಘಟಕಗಳು ಕಾರ್ಯಾಚರಣೆಗೊಂಡು, ಸಾರ್ವಜನಿಕರಿಗೆ ಶುದ್ಧ ಕುಡಿಯುವ ನೀರನ್ನು ಪೂರೈಸಲು ಪ್ರಾರಂಭವಾದ ದಿನದಿಂದ **30.06.2017ರವರೆಗೆ,** ಪ್ರತಿ ತಿಂಗಳಿಗೆ ಪ್ರತಿ **500*LPH* ಸಾಮರ್ಥ್ಯದ ಘಟಕಕ್ಕೆ ರೂ.2500/-** ಹಾಗೂ ಪ್ರತಿ **1000*LPH* ಸಾಮರ್ಥ್ಯದ ಘಟಕಕ್ಕೆ ರೂ.3000/-** ವನ್ನು ಕೆ.ಆರ್.ಐ.ಡಿ.ಎಲ್. ಸಂಸ್ಥೆಗೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಿಂದ ನೇರವಾಗಿ ಭರಿಸಲಾಗುವುದು. ಇದಕ್ಕೆ ಸಂಬಂಧಪಟ್ಟ ಹೊಂದಾಣಿಕೆಯ ಮೊತ್ತದ ಪ್ರಸ್ತಾವನೆಯನ್ನು ಕೆ.ಆರ್.ಐ.ಡಿ.ಎಲ್. ಸಂಸ್ಥೆರವರು ಗ್ರಾ.ಕು.ನೀ.&ನೈ.ಇಲಾಖೆರವರಿಗೆ ಸಲ್ಲಿಸಲು ಕ್ರಮವಹಿಸುವುದು.

3. ಕೆ.ಆರ್.ಐ.ಡಿ.ಎಲ್. ಸಂಸ್ಥೆಯವರು ನೀರು ಶುದ್ಧೀಕರಣ ಘಟಕಗಳ ಕಾರ್ಯಕ್ಷಮತೆಯ ವರದಿಯನ್ನು 15 ದಿನಕ್ಕೊಮ್ಮೆ, ಸಂಬಂಧಿಸಿದ ಜಿಲ್ಲಾ ಪಂಚಾಯತನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮತ್ತು ಕಾರ್ಯಪಾಲಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ ಇವರಿಗೆ ಸಲ್ಲಿಸುವುದು.

4. **30.06.2017ರ ನಂತರ** ಕೆ.ಆರ್.ಐ.ಡಿ.ಎಲ್. ಸಂಸ್ಥೆಯಿಂದ ಅನುಷ್ಠಾನಗೊಳಿಸಿರುವ ಎಲ್ಲಾ ಮಾದರಿಯ ನೀರು ಶುದ್ಧಿಕರಣ ಘಟಕಗಳ ವಾರ್ಷಿಕ ನಿರ್ವಹಣೆ ಗುತ್ತಿಗೆ (AMC)ಯನ್ನು ಸದರಿ ಸಂಸ್ಥೆಯಿಂದ ಅಳವಡಿಸಲ್ಪಟ್ಟಿರುವ ನೀರು ಶುದ್ಧೀಕರಣ ಘಟಕಗಳ ಮಾರಾಟಗಾರರೊಂದಿಗೆ, ಸಂಬಂಧಪಟ್ಟ ಗ್ರಾಮ ಪಂಚಾಯತ್‌ನ ಪಂಚಾಯತ್ ಅಭಿವೃದ್ಧಿ ಅಧಿಕಾರಿ (PDO)ಯವರು ಮೇಲೆ (5), (6) ಮತ್ತು (7)ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿನ ಮಾರ್ಗಸೂಚಿ ಹಾಗೂ ದರಗಳನ್ವಯ ಕರಾರು ಮಾಡಿಕೊಳ್ಳುವ ಸಲುವಾಗಿ ಗ್ರಾಮ ಪಂಚಾಯತ್‌ವತಿಯಿಂದ ಕ್ರಮವಹಿಸುವುದು.

5. **30.06.2017ರ ನಂತರ** ಕೆ.ಆರ್.ಐ.ಡಿ.ಎಲ್.ಸಂಸ್ಥೆ ಮುಖೇನ ಅನುಷ್ಠಾನಗೊಳಿಸಿರುವ ಎಲ್ಲಾ ಮಾದರಿಯ ನೀರು ಶುದ್ಧಿಕರಣ ಘಟಕಗಳ **ಕಾರ್ಯಾಚರಣೆ ಮತ್ತು ನಿರ್ವಹಣೆ (O&M)** ಹಾಗೂ **ವಾರ್ಷಿಕ ನಿರ್ವಹಣೆ ಗುತ್ತಿಗೆ (AMC) ಯ ಸಂಪೂರ್ಣ ವೆಚ್ಚವನ್ನು** ಗ್ರಾಮ ಪಂಚಾಯತ್ ಅನುದಾನದಲ್ಲಿ ಭರಿಸುವ ಸಂಬಂಧ, ಪತೀವರ್ಷ ಗ್ರಾಮ ಪಂಚಾಯತಿಯ ವಾರ್ಷಿಕ ಕ್ರಿಯಾ ಯೋಜನೆಯಲ್ಲಿ ಅಳವಡಿಸಿಕೊಂಡು ವೆಚ್ಚ ಭರಿಸಲು ಕ್ರಮವಹಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಬಿ. ಕೃಷ್ಣಪ್ಪ)**
ಸರ್ಕಾರದ ಉಪ ಕಾರ್ಯದರ್ಶಿ (ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು(ಎಯು-1)ರವರ ಶಾಖಾ ಕಛೇರಿ, ಕಾಲೇಜುರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.

6. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
8. ವಿಶೇಷಾಧಿಕಾರಿಗಳು (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು-1.
9. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು-1.
10. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 1ನೇ ಮಹಡಿ, 'E' Block, K.H.B Complex, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-09.
11. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು-09.
12. ಮುಖ್ಯ ಲೆಕ್ಕಾಧಿಕಾರಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 2ನೇ ಮಹಡಿ, 'E' Block, K.H.B Complex, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-09.
13. ರಾಜ್ಯದ ಎಲ್ಲಾ (30) ಜಿಲ್ಲೆಗಳ ಜಿಲ್ಲಾಧಿಕಾರಿಗಳು.
14. ರಾಜ್ಯದ ಎಲ್ಲಾ (30) ಜಿಲ್ಲಾ ಪಂಚಾಯತ್‌ಗಳ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು / ಮುಖ್ಯ ಲೆಕ್ಕಾಧಿಕಾರಿಗಳು.
15. ರಾಜ್ಯದ ಎಲ್ಲಾ (4) ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತಗಳ ಅಧೀಕ್ಷಕ ಅಭಿಯಂತರರು,
16. ರಾಜ್ಯದ ಎಲ್ಲಾ (30) ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳ ಕಾರ್ಯಪಾಲಕ ಇಂಜಿನಿಯರ್‌ಗಳು.
17. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ ಇಲಾಖೆ, ಬೆಂಗಳೂರು,
18. ಉಪ ನಿರ್ದೇಶಕರು, ನೆಟ್ ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ನಂ.49, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
19. ಜಿಲ್ಲಾ ಖಜಾನಾಧಿಕಾರಿಗಳು, ಬೆಂಗಳೂರು,
20. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್‌ರವರ ಗ್ರಾಮೀಣಾಭಿವೃದ್ಧಿರಾಜ್ಯ ಸಂಸ್ಥೆ, ಲಲಿತ್ ಮಹಲ್‌ರಸ್ತೆ, ಮೈಸೂರು.
21. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ (ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿ.
22. ಆಯುಕ್ತರು ಮತ್ತು ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 2ನೇ ಮಹಡಿ, 'E' Block, K.H.B complex, ಕಾವೇರಿ ಭವನ, ಕೆ.ಜಿರಸ್ತೆ, ಬೆಂಗಳೂರು-560009ರವರ ಆಪ್ತ ಕಾರ್ಯದರ್ಶಿ.
23. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್‌ಇಲಾಖೆರವರ ಆಪ್ತ ಸಹಾಯಕರು.
24. ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ನಂ.309, 3ನೇ ಮಹಡಿ, ಗೇಟ್ ನಂ.1, ಬಹುಮಹಡಿಗಳ ಕಟ್ಟಡ, ಅಂಬೇಡ್ಕರ್ ವೀಧಿ, ಬೆಂಗಳೂರು-560001.
25. ಗ್ರಾ.ಅ.ಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ-(10ಪ್ರತಿಗಳು).
26. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ.&ಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು)
27. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ)
28. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.